# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿಬಿಎಂಪಿ/ಸಕಾಅ/ಕೊಉವಿ/ಪಿಆರ್/03/2021-22

ಸಹಾಯಕ ಅಭಿಯಂತರರ ಕಛೇರಿ
ಕೊಡಿಗೇಹಳ್ಳಿ ಉಪವಿಭಾಗ, ಯಲಹಂಕ ವಲಯ
9ನೇ ಅಡ್ಡರಸ್ತೆ, ಡಿ ಬ್ಲಾಕ್
ಸಹಕಾರನಗರ, ಬೆಂಗಳೂರು 560092
ದಿನಾಂಕ: 06.04.2022

**ದಿನಾಂಕ: 06.04.2022 ರಂದು ವಾರ್ಡ್ ಸಂಖ್ಯೆ 08 ರಲ್ಲಿ ನಡೆದ ವಾರ್ಡ್ ಸಮಿತಿಯ ಸಭೆಯ ನಡವಳಿಗಳು:-**

**ಸಭೆಗೆ ಹಾಜರಿದ್ದವರು:**

- ಶ್ರೀ ಗುರು, ಕಾರ್ಯಪಾಲಕಅಭಿಯಂತರರು, ನೋಡೆಲ್ ಅಧಿಕಾರಿಗಳು ಹಾಗೂ ಅಧ್ಯಕ್ಷರು ವಾರ್ಡ್ ಸಮಿತಿ.
- ಶ್ರೀ ಪ್ರವೀಣ್ಎ.ಆರ್., ಕಿರಿಯ ಅಭಿಯಂತರರು ಹಾಗೂ ವಾರ್ಡ್ ಸಮಿತಿ ಕಾರ್ಯದರ್ಶಿ
- ಶ್ರೀಮತಿ. ಕವಿತಾ, ಕಿರಿಯ ಆರೋಗ್ಯ ಪರಿವೀಕ್ಷಕರು, ಘನ ತ್ಯಾಜ್ಯ
- ಶ್ರೀ. ಡಾ॥ ರವಿ, ಆರೋಗ್ಯ ವೈದ್ಯಾಧಿಕಾರಿ, ಪ್ರಾಥಮಿಕ ಆರೋಗ್ಯ ಕೇಂದ್ರ, ಕೊಡಿಗೇಹಳ್ಳಿ.
- ಶ್ರೀಮತಿ. ಚಿಂತನ, ಸಹಾಯಕ ಅಭಿಯಂತರರು (ಬೆಂಗಳೂರು ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ) (**BWSSB**)
- ಶ್ರೀ ಕೆ.ಎನ್. ಬಾಬುರೆಡ್ಡಿ, ಕಿರಿಯ ಅಭಿಯಂತರರು, ವಿದ್ಯುತ್ ವಿಭಾಗ, ಬಿಬಿಎಂಪಿ
- ಶ್ರೀ ವಿ. ಮಂಜುನಾಥ್,ಆರೋಗ್ಯ ಪರಿವೀಕ್ಷಕರು, ವಾರ್ಡ್ ಸಂಖ್ಯೆ 08.
- ಶ್ರೀ ಎಂ.ಎನ್. ಮುನಿರಾಜು, ಕಿರಿಯ ಅಭಿಯಂತರರು, ಬೆಸ್ಕಾಂ
- ಶ್ರೀ ಜಿ. ವಿಶ್ವನಾಥ್, ಕಂದಾಯ ಪರಿವೀಕ್ಷಕರು, ವಾರ್ಡ್ ಸಂಖ್ಯೆ 08.
- ಶ್ರೀ ಗೋವಿಂದರಾಜು.ಇ, ಸಹಾಯಕ ಅಭಿಯಂತರರು, ಬೆಸ್ಕಾಂ

**ವಾರ್ಡ್ ಸಮಿತಿ ಸದಸ್ಯರು**

- ಶ್ರೀ ಸುಧರ್ಶನ್ ರೆಡ್ಡಿ, ಸಹಕಾರನಗರ ಸದಸ್ಯರು
- ಶ್ರೀಮತಿ. ಶಾಂತಕುಮಾರಿ, ಬಾಲಾಜಿ ಬಡಾವಣೆ, ಸದಸ್ಯರು
- ಶ್ರೀ ಕೃಷ್ಣಕುಮಾರ್ ಸಿ, ಡಿಫೆನ್ಸ್ ಕಾಲೋನಿ ಸದಸ್ಯರು
- ಶ್ರೀ ವೆಂಕಟಸ್ವಾಮಿ, ದೇವಿನಗರ, ಸದಸ್ಯರು

ವಾರ್ಡ್ ಸಮಿತಿ ಸಭೆಯನ್ನು ವಾರ್ಡ್ ಸಮಿತಿ ಕಾಯದರ್ಶಿಗಳಾದ ಶ್ರೀ. ಪ್ರವೀಣ್ ಎ.ಆರ್. ರವರು ವಾರ್ಡ್ ಸಮಿತಿ ಅಧ್ಯಕ್ಷರು, ವಾರ್ಡ್ ಸಮಿತಿಯ ಸದಸ್ಯರುಗಳು ಹಾಗೂ ಎಲ್ಲಾ ವೃಂದದ ಅಧಿಕಾರಿಗಳನ್ನು ಸ್ವಾಗತಿಸುತ್ತಾ ಸಭೆಯನ್ನು ಪ್ರಾರಂಭಿಸಲಾಯಿತು ಹಾಗೂ ಈ ಹಿಂದಿನ ಸಭೆಯಲ್ಲಿ ಚರ್ಚಿಸಿದ ಸಮಸ್ಯೆಗಳನ್ನು ಪರಿಹರಿಸಲಾಗಿದೆ ಎಂದು ಸಭೆಗೆ ತಿಳಿಸಿದರು.

ನೋಡಲ್ ಅಧಿಕಾರಿರವರು ಮಾತನಾಡುತ್ತ, ಹಿಂದಿನ ಸಭೆಯ ನಡುವಳಿಗಳ ಬಗ್ಗೆ ಓದಿ ಚರ್ಚಿಸಿ, ಸಮಸ್ಯೆಗಳನ್ನು ಬಗೆಹರಿಸಿರುವ ಕುರಿತು ಹಾಜರಿದ್ದ ಅಧಿಕಾರಿಗಳಿಗೆ ಮತ್ತು ವಸತಿ ಕ್ಷೇಮಾಭಿವೃಧಿ ಸಂಘದ ಸದಸ್ಯರುಗಳ ಜೊತೆಗೆ ಚರ್ಚಿಸಿದರು.

ಶ್ರೀಮತಿ. ಶಾಂತಕುಮಾರಿ, ಬಾಲಾಜಿ ಬಡಾವಣೆ, ಸದಸ್ಯರು ಮಾತನಾಡಿ, ಚರಂಡಿಯಲ್ಲಿ ಸಿಲ್ಟ್ ತುಂಬಿರುವುದರಿಂದ ನೀರಿನ ಹರಿವು ಸಾರಾಗವಾಗಿ ಹರಿಯದೆ ಸ್ಥಗಿತವಾಗಿರುತ್ತದೆ. ಇದರಿಂದ ಸಾರ್ವಜನಿಕರಿಗೆ ಬಹಳ ತೊಂದರೆಯನ್ನುಂಟು ಮಾಡುತ್ತಿದೆ ಹಾಗೂ ಬೋರ್‌ವೆಲ್ ಇದ್ದು, ಈಗಾಗಲೇ ಸದರಿ ಬೋರ್‌ವೆಲ್‌ನಲ್ಲಿ ನೀರು ನಿಂತು ಹೋಗಿರುವುದರಿಂದ ಪರ್ಯಾಯ ಬೋರ್‌ವೆಲ್ ಕೊಳವೆಬಾವಿಯನ್ನು ಕೊರೆಯಿಸುವಂತೆ ಸಭೆಯಲ್ಲಿ ಮನವಿ ಮಾಡಿದರು.

ಈ ಕುರಿತು ನೋಡಲ್ ಅಧಿಕಾರಿಗಳು ಮಾತನಾಡಿ ಸಿಲ್ಟ್ ಮತ್ತು ಟ್ರಾಕ್ಟರ್ ಬಿಟ್ಟು ಸಮಸ್ಯೆಯನ್ನು ಬಗೆಹರಿಸಲು ಶ್ರೀ ಪ್ರವೀಣ್ ರವರಿಗೆ ಸೂಚಿಸಿದರು. ನಂತರ ಶ್ರೀ ಪ್ರವೀಣ್, ಕಿರಿಯ ಅಭಿಯಂತರರು ಮಾತನಾಡಿ ಸದರಿ ಸಿಲ್ಟ್ ಮಣ್ಣನ್ನು ತೆಗೆದು ಒಣಗಿದ ನಂತರ ಡಂಪಿಂಗ್ ಯಾರ್ಡ್‌ಗೆ ಸ್ಥಳಾಂತರಿಸಲಾಗುವುದು ಹಾಗೂ ಸದರಿ ಬಡಾವಣೆಯಲ್ಲಿ ನೀರಿನ ಸಮಸ್ಯೆ ಬಗೆಹರಿಸಲು ನೀರಿನ ಟಾಂಕರ್‌ಗಳ ಮುಖಾಂತರ ನೀರು ಸರಬರಾಜು ಮಾಡಲಾಗುವುದೆಂದು ಸಭೆಗೆ ತಿಳಿಸಿದರು.

ಶ್ರೀ ಸುಧರ್ಶನ್ ರೆಡ್ಡಿ, ಸಹಕಾರನಗರ ಸದಸ್ಯರು, ರವರು ಮಾತನಾಡಿ ಸದರಿ ಬಡಾವಣೆ ಆಟದ ಮೈದಾನದಲ್ಲಿ ತುಂಬ ಹುಲ್ಲು ಬೆಳೆದಿದ್ದು ಮೈದಾನವನ್ನು ಬಳಸುವ ಸಾರ್ವಜನಿಕರಿಗೆ ಬಹಳ ತೊಂದರೆ ಉಂಟಾಗುತ್ತಿದೆ ಎಂದು ಸಭೆಗೆ ತಿಳಿಸಿದರು.

ಶ್ರೀ ಪ್ರವೀಣ್‌ಎ.ಆರ್, ಕಿರಿಯ ಅಭಿಯಂತರರುರವರು ಮಾತನಾಡಿ ಸಮಸ್ಯೆಯನ್ನು ಬಗೆಹರಿಸಿ ಕೊಡುವುದಾಗಿ ಸಭೆಗೆ ತಿಳಿಸಿದರು

ಶ್ರೀ ಕೃಷ್ಣಕುಮಾರ್ ಸಿ, ಡಿಫೆನ್ಸ್ ಕಾಲೋನಿ ಸದಸ್ಯರು ಮಾತನಾಡಿ ಬಿಬಿಎಂಪಿ ವಾರ್ಡ್ 08 ರ ಕಛೇರಿಯ ಮುಂದೆ ಇರುವ ಪಾರ್ಕ್ ಜಾಗದಲ್ಲಿ ಅಕ್ರಮವಾಗಿ ಡೆಬ್ರಿಸ್ ಕಸವನ್ನು ಹಾಕುತ್ತಿರುವವರ ವಿರುದ್ಧ ಹಾಗೂ ಮೂತ್ರವಿಸರ್ಜನೆ ಮಾಡುತ್ತಿರುವವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವಂತೆ ಸಭೆಗೆ ಮನವಿ ಮಾಡಿಕೊಂಡರು.

ಈ ಕುರಿತು ನೋಡಲ್ ಅಧಿಕಾರಿಗಳು ಮಾತನಾಡಿ ಪಾರ್ಕ್ ಜಾಗದ ಬಗ್ಗೆ ನ್ಯಾಯಾಲಯದಲ್ಲಿ ದಾವೆ ಇರುವ ಬಗ್ಗೆ ತಿಳಿಸುತ್ತಾ, ಅಕ್ರಮವಾಗಿ ಕಸವನ್ನು ಹಾಕ್ಕುತ್ತಿರುವವರ ವಿರುದ್ಧ ಹಾಗೂ ಮೂತ್ರ ವಿಸರ್ಜನೆ ಮಾಡುತ್ತಿರುವವರ ವಿರುದ್ಧ ದಂಡ ವಿದಿಸಲು ಕಿರಿಯ ಆರೋಗ್ಯ ಪರಿವೀಕ್ಷಕರು, ಘನ ತ್ಯಾಜ್ಯ ರವರಿಗೆ ಸೂಚಿಸಿದರು

ಶ್ರೀ. ಡಾ॥ ರವಿ, ಆರೋಗ್ಯ ವೈದ್ಯಾಧಿಕಾರಿ, ಕೊಡಿಗೇಹಳ್ಳಿ ರವರು ಮಾತನಾಡಿ ಪ್ರಾಥಮಿಕ ಆರೋಗ್ಯ ಕೇಂದ್ರದ ಪಕ್ಕದಲ್ಲಿರುವ ದೊಡ್ಡ ಮಳೆನೀರು ಚರಂಡಿ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಬ್ಲಾಕ್ ಸ್ಪಾಟ್‌ಗಳಿದು ಇದರಿಂದ ಆರೋಗ್ಯ ಕೇಂದ್ರಕ್ಕೆ ಬರುವ ಸಾರ್ವಜನಿಕರಿಗೆ ತೊಂದರೆ ಉಂಟಾಗುತ್ತಿದೆ ಎಂದು ಸಭೆಗೆ ತಿಳಿಸುತ್ತಾ ಆರೋಗ್ಯ ಕೇಂದ್ರದ ಎದುರು ರಸ್ತೆಯಲ್ಲಿ ಬೆಸ್ಕಾಂ ಕೇಬಲ್ ಕೆಲಸ

ಮಾಡಿದ್ದು ರಸ್ತೆಯಲ್ಲಿ ಓಡಾಡುವ ವಾಹನ ಸವಾರರಿಗೆ ಹಾಗೂ ಸಾರ್ವಜನಿಕರಿಗೆ ಬಹಳ ತೊಂದರೆ ಉಂಟಾಗುತ್ತಿದೆ, ಸಮಸ್ಯೆಯನ್ನು ಬಗೆಹರಿಸಿ ಕೊಡಬೇಕೆಂದು ಸಭೆಗೆ ಮನವಿ ಮಾಡಿಕೊಂಡರು.

ಈ ಕುರಿತು ನೋಡಲ್ ಅಧಿಕಾರಿಗಳು ಮಾತನಾಡಿ ಬ್ಲಾಕ್‌ಸ್ಪಾಟ್‌ಗಳು ಆರೋಗ್ಯ ಕೇಂದ್ರದ ಪಕ್ಕದಲ್ಲಿದರೆ ರೋಗ ಹರುಡುತ್ತದೆ ಆದರಿಂದ ಈ ಕೂಡಲೆ ಬ್ಲಾಕ್‌ಸ್ಪಾಟ್‌ಗಳಲ್ಲಿನ ಕಸವನ್ನು ತೆಗೆದು, ಇನ್ನುಮುಂದೆ ಯಾರು ಕಸ ಹಾಕದಂತೆ ಜಾಗುರುತರಾಗಬೇಕೆಂದು ಕಿರಿಯ ಅಭಿಯಂತರರಿಗೆ ಸೂಚಿಸಿದರು. ಸಭೆಯಲ್ಲಿ ಹಾಜರಿದ್ದ ಬೆಸ್ಕಾಂ ಸಹಾಯಕ ಅಭಿಯಂತರರಿಗೆ ಆರೋಗ್ಯ ಕೇಂದ್ರದ ಮುಂದೆ ರಸ್ತೆಯನ್ನು ಸರಿಪಡಿಸಿ ಕೊಡಲು ಸೂಚಿಸಿದರು.

ಅಂತಿಮವಾಗಿ ನೋಡಲ್ ಅಧಿಕಾರಿಯವರು ಈ ಮೇಲ್ಕಂಡ ಅಂಶಗಳ ಬಗ್ಗೆ ವಿವರವಾಗಿ ಅಧಿಕಾರಿಗಳಿಗೆ ನಿರ್ದೇಶನ ನೀಡಿ, ಸಭೆಯಲ್ಲಿ ಉಪಸ್ಥಿತರಿದ್ದ ಅಧಿಕಾರಿಗಳೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು ಹಾಗೂ ಈ ಸಭೆಗೆ ಗೈರು ಹಾಜರಿದ್ದವರಿಗೆ ಕಾರಣ ಕೇಳಿ ನೋಟೀಸ್‌ಗಳನ್ನು ಜಾರಿ ಮಾಡಲು ಸೂಚಿಸಿದರು. ಸದರಿ ವಿಷಯಗಳ ಬಗ್ಗೆ ಕ್ರಮಕೈಗೊಳ್ಳಲು ಸೂಚಿಸಿದರು ನಂತರ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು ಮತ್ತು
ಕಿರಿಯ ಅಭಿಯಂತರರು
ವಾರ್ಡ್ 8, ಕೊಡಿಗೇಹಳ್ಳಿ ಉಪ ವಿಭಾಗ

ನೋಡಲ್ ಅಧಿಕಾರಿ ಹಾಗೂ
ವಾರ್ಡ್ ಸಮಿತಿ ಅಧ್ಯಕ್ಷರು
ವಾರ್ಡ್ ಸಂಖ್ಯೆ:08

<u>ಪ್ರತಿಯನ್ನು:-</u>

1. ಮಾನ್ಯ ಆಡಳಿತ ಅಧಿಕಾರಿಗಳು, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮಾನ್ಯ ಮುಖ್ಯ ಆಯುಕ್ತರು, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
3. ಮಾನ್ಯ ಅಪರ ಆಯುಕ್ತರು, ಯಲಹಂಕ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
4. ಆರೋಗ್ಯಾಧಿಕಾರಿಗಳು, ಯಲಹಂಕ ವಲಯ, ಬಿಬಿಎಂಪಿ ರವರ ಮಾಹಿತಿಗಾಗಿಸಲ್ಲಿಸಿದೆ.
5. ವಲಯ ಅರಣ್ಯಾಧಿಕಾರಿಗಳು, ಯಲಹಂಕ ವಲಯ, ಬಿಬಿಎಂಪಿ ರವರ ಮಾಹಿತಿಗಾಗಿ ಹಾಗೂ ಮುಂದಿನ ಸಭೆಗೆ ಹಾಜರಾಗಲು ತಿಳಿಸಿದೆ.
6. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ ರವರ ಮಾಹಿತಿಗಾಗಿ ಕಳುಹಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
8. ಸಹಾಯಕ ಕಾರ್ಯಪಾಲಕ ಅಭಿಯಂತರರು, ಕೊಡಿಗೇಹಳ್ಳಿ ಉಪವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಕಳುಹಿಸಿದೆ.
9. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಕಳುಹಿಸಿದೆ.
10. ಕಾರ್ಯದರ್ಶಿ ಹಾಗೂ ಸಂಚಾಲಕರು, ವಾರ್ಡ್ ಕಮಿಟಿರವರ ಮಾಹಿತಿಗಾಗಿ ಕಳುಹಿಸಿದೆ.
11. ವಾರ್ಡ್ ಕಮಿಟಿ ಸದಸ್ಯರುಗಳ ಮಾಹಿತಿಗಾಗಿ ಕಳುಹಿಸಿದೆ.
12. ಕಛೇರಿ ಕಡತಕ್ಕೆ.